ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.**

**ಕಡತ ಸಂಖ್ಯೆ: ಸಿ7(8)/ಆರ್.ಟಿ.ಇ/ಕೆ.ಎಸ್.ಸಿ.ಪಿ.ಸಿ.ಆರ್/2017-18** **ದಿನಾಂಕ:13-10-2017**

## :: ಸುತ್ತೋಲೆ ::

ವಿಷಯ:- ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯಿದೆ 2009ರ "ಸಾರ್ವಜನಿಕ ಅಹವಾಲು ಕಾರ್ಯಕ್ರಮ"ದಲ್ಲಿ ಕಡ್ಡಾಯವಾಗಿ ಭಾಗವಹಿಸುವ ಬಗ್ಗೆ.

*****

ರಾಜ್ಯದಲ್ಲಿ ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯಿದೆ 2009ರ ಸೆಕ್ಷನ್ 37 ರಂತೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ರಚಿತವಾಗಿ ಕಾರ್ಯನಿರ್ವಹಿಸುತ್ತಿದೆ. ಆಯೋಗವು ಆಗಿಂದಾಗ್ಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯಿದೆ 2009, ಮಕ್ಕಳ ಪಾಲನೆ ಪೋಷಣೆ ಮತ್ತು ರಕ್ಷಣೆ ಕಾಯಿದೆ 2006, ಪೋಕ್ಸೋ 2012ಕ್ಕೆ ಸಂಬಂಧಿಸಿಂತೆ "ಸಾರ್ವಜನಿಕ ಅಹವಾಲು" ಕಾಯಕ್ರಮವನ್ನು ಗೌರವಾನ್ವಿತ ನ್ಯಾಯಮೂರ್ತಿಗಳ ಸಮ್ಮುಖದಲ್ಲಿ ಹಮ್ಮಿಕೊಳ್ಳುತ್ತದೆ. ಸದರಿ ಕಾರ್ಯಕ್ರಮದಲ್ಲಿ ಸಂಬಂಧಿಸಿದ ಶಾಲೆಗಳ ಮುಖ್ಯಸ್ಥರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಉಪನಿರ್ದೇಶಕರು(ಆಡಳಿತ) ರವರುಗಳು ಹಾಜರಾಗಿ ದೂರುಗಳಿಗೆ ಸಂಬಂಧಿಸಿದಂತೆ ಸೂಕ್ತ ಮಾಹಿತಿ ಒದಗಿಸುವುದು ಅವಶ್ಯವಾಗಿದೆ. ದಿನಾಂಕ:10-10-2017ರಂದು ನಡೆದ ಇಂತಹಾ ಅಹವಾಲಿನಲ್ಲಿ ಶಾಲೆಗಳ ಮುಖ್ಯಸ್ಥರು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಉಪ ನಿರ್ದೇಶಕರು (ಆ) ಭಾಗವಹಿಸದ ಕಾರಣ ಹಲವಾರು ದೂರುಗಳ ತೀರ್ಮಾನ ಸಾಧ್ಯವಾಗಿರುವುದಿಲ್ಲ. ಈ ರೀತಿಯ ಗೈರು ಹಾಜರಿಯನ್ನು ಇಲಾಖೆ ಗಂಭೀರವಾಗಿ ಪರಿಗಣಿಸಿದೆ. ಇನ್ನು ಮುಂದೆ ಆಯೋಗದಿಂದ ನಡೆಯುವ ಇಂತಹಾ ಅಹವಾಲು ಕಾರ್ಯಕ್ರಮಗಳಿಗೆ ಸಂಬಂಧಿಸಿದವರ ಹಾಜರಾತಿ ಕಡ್ಡಾಯವಾಗಿರುತ್ತದೆ. ಇಲ್ಲದಿದ್ದಲ್ಲಿ ಇಲಾಖೆ ಶಿಸ್ತಿನ ಕ್ರಮ ಕೈಗೊಳ್ಳುತ್ತದೆ ಎಂದು ಈ ಮೂಲಕ ತಿಳಿಸಲಾಗಿದೆ.

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

ಇವರಿಗೆ:

1) ರಾಜ್ಯದ ಎಲ್ಲಾ ಉಪ ನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ.
2) ರಾಜ್ಯದ ಎಲ್ಲಾ ವಲಯ/ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಉಪ ನಿರ್ದೇಶಕರ(ಆಡಳಿತ) ಇವರ ಮುಖಾಂತರ ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು:

1) ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗರ ರಸ್ತೆ, ಕೆ ಆರ್ ವೃತ್ತ, ಬೆಂಗಳೂರು ಇವರ ಅವಗಾಹನೆಗಾಗಿ.
2) ಮಾನ್ಯ ಅಧ್ಯಕ್ಷರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, 4ನೇ ಮಹಡಿ, ಕೃಷಿ ಭವನ, ನೃಪ ತುಂಗ ರಸ್ತೆ, ರಾಣಿ ಚನ್ನಮ್ಮ ವೃತ್ತ, ಬೆಂಗಳೂರು-560 002 ಇವರ ಅವಗಾಹನೆಗಾಗಿ.